# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: 2014-15ನೇ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳು.**

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 29 ಸೇನೌವ 2014, ಬೆಂಗಳೂರು, ದಿನಾಂಕ: 20.5.2014.**

**ಓದಲಾಗಿದೆ:-**

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ. 2013, ಬೆಂಗಳೂರು, ದಿ:07.06.2013.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ಬೆಂಗಳೂರು, ದಿ:14.06.2013
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ಬೆಂಗಳೂರು, ದಿ:06.02.2014

**ಪ್ರಸ್ತಾವನೆ:-**

ಮೇಲೆ ಓದಲಾದ ಸರ್ಕಾರದ ಆದೇಶಗಳಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಮತ್ತು ಜೂನ್ ತಿಂಗಳುಗಳಲ್ಲಿ ಸದರಿ ಆದೇಶಗಳಲ್ಲಿ ಸೂಚಿಸಿರುವ ಷರತ್ತುಗಳಿಗೊಳಪಟ್ಟು ಮಾತ್ರ ಮಾಡಬಹುದಾಗಿದೆ. 2014-15ನೇ ಸಾಲಿನಲ್ಲಿ ಈ ಮಾರ್ಗಸೂಚಿಗಳನ್ನು ಈ ಕೆಳಕಂಡ ಮಾರ್ಪಾಡುಗಳನ್ನು ಅನುಸರಿಸಿ ವರ್ಗಾವಣೆಗಳನ್ನು ಮಾಡಲು ತೀರ್ಮಾನಿಸಲಾಗಿದೆ.

**ಆದೇಶ**

ವರ್ಗಾವಣೆ ಉದ್ದೇಶಕ್ಕಾಗಿ ಈಗಾಗಲೇ ಹೊರಡಿಸಲಾಗಿರುವ ಪ್ರತ್ಯೇಕ ಅಧಿನಿಯಮ/ನಿಯಮಗಳು ಅನ್ವಯವಾಗುವ ಸರ್ಕಾರಿ ನೌಕರರನ್ನು ಹೊರತುಪಡಿಸಿ, ಇತರೆ ಸರ್ಕಾರಿ ನೌಕರರನ್ನು ಮೇಲೆ ಓದಲಾದ ಆದೇಶಗಳಲ್ಲಿನ ಸೂಚನೆಗಳನ್ನು ಪಾಲಿಸಿ ಈ ಕೆಳಗಿನಂತೆ ವರ್ಗಾವಣೆ ಮಾಡಬಹುದು :-

(1) ಎಲ್ಲಾ ವರ್ಗಾವಣೆ ಪ್ರಕ್ರಿಯೆಗಳನ್ನು ದಿನಾಂಕ: 10.06.2014ರೊಳಗೆ ಮುಗಿಸಲು ಕ್ರಮ ಕೈಗೊಳ್ಳುವುದು.

(2) ವರ್ಗಾವಣೆಯನ್ನು ಮಿತವಾಗಿ, ಅವಶ್ಯವಿದ್ದಲ್ಲಿ ಮಾತ್ರ ಮಾಡುವುದು.

(3) ದಿನಾಂಕ: 07.06.2013ರ ವರ್ಗಾವಣೆ ಆದೇಶದಲ್ಲಿ ವರ್ಗಾವಣೆ ಮಾಡಲು ನಿಗದಿಪಡಿಸಲಾದ ಕನಿಷ್ಠ ಸೇವಾವಧಿಯನ್ನು ಈ ಕೆಳಕಂಡಂತೆ ಮಾರ್ಪಡಿಸಲಾಗಿದೆ.

| ಕ್ರ.ಸಂ. | ವೃಂದ | ಸೇವಾವಧಿ (ವರ್ಷಗಳು) |
|---|---|---|
| 1 | ಎಲ್ಲಾ ಗುಂಪು-ಎ ಹುದ್ದೆಗಳು | 1 ವರ್ಷ |
| 2 | ಎಲ್ಲಾ ಗುಂಪು-ಬಿ ಹುದ್ದೆಗಳು | |
| 3 | ಎಲ್ಲಾ ಗುಂಪು-ಸಿ ಹುದ್ದೆಗಳು | 2 ವರ್ಷ |
| 4 | ಎಲ್ಲಾ ಗುಂಪು-ಡಿ ಹುದ್ದೆಗಳು | 7 ವರ್ಷ |

2. ಈ ಅವಧಿಯ ನಂತರ ಯಾವುದೇ ವರ್ಗಾವಣೆಗಳನ್ನು ಮಾಡಬೇಕಾದಲ್ಲಿ ಹಾಗೂ ಮೇಲಿನ ಯಾವುದೇ ಷರತ್ತುಗಳಿಗೆ ಹೊರತಾದ ಪ್ರಕರಣಗಳಲ್ಲಿ ವರ್ಗಾವಣೆಗಳನ್ನು ಮಾನ್ಯ ಮುಖ್ಯಮಂತ್ರಿಯವರ ಪೂರ್ವಾನುಮೋದನೆಯನ್ನು ಪಡೆದ ನಂತರವೇ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ|| ಮಂಜುಳ ಜಿ.ಎಸ್.) 20/5/14
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು. ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 200 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಅ) ಶಾಖೆಗೆ ಕಳುಹಿಸಬೇಕೆಂದು ಕೋರಲಾಗಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
6. ಎಲ್ಲಾ ಸಚಿವರ ಹಾಗೂ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
7. ಎಲ್ಲಾ ಪ್ರಾದೇಶಿಕ ಆಯುಕ್ತರು/ಎಲ್ಲಾ ಇಲಾಖಾ ಮುಖ್ಯಸ್ಥರು.
8. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
9. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
10. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
11. *ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. *ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ. ರೋಡ್, ಬೆಂಗಳೂರು.
14. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
16. ಸಚಿವಾಲಯದ ಎಲ್ಲಾ ಶಾಖೆಗಳು.
17. ವಾರದ ರಾಜ್ಯಪತ್ರ.
18. ಶಾಖಾ ರಕ್ಷಾ ಕಡತ/ಬಿಡಿ ಪ್ರತಿ

(*ಮುಖ ಪತ್ರದೊಂದಿಗೆ)